ಮೂಲ ದಾವಾ ಸಂಖ್ಯೆ. 120/2021 ಪಿ ಡಬ್ಲ್ಯೂ 1

(ದಿನಾಂಕ 15-07-2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣಿಕರಿಸಲಾಯಿತು.)

ಮುಖ್ಯ ವಿಚಾರಣೆಃ ವಾದಿ ಪರ ಶ್ರೀ ಎ ಕೆ ವಕೀಲರಿಂದಃ-

ನಾನು ನನ್ನ ಮುಖ್ಯ ವಿಚಾರಣಾ ಸಾಕ್ಷ್ಯದ ಕುರಿತು ನ್ಯಾಯಾಲಯದ ಮುಂದೆ ನನ್ನ ಸಾಕ್ಷಿ ಪ್ರಮಾಣಪತ್ರವನ್ನು ಸಲ್ಲಿಸಿದ್ದು ಇರುತ್ತದೆ. ಅದರಲ್ಲಿರುವ ಸಂಗತಿಗಳು ಸತ್ಯವಾಗಿದ್ದು ಅದಕ್ಕೆ ನಾನೇ ಸಹಿ ಮಾಡಿದ್ದೇನೆ.

ಸರ್ವೆ ನಂ. 175 ರ 4 ಕೈಬರಹ ಪಹಣಿಗಳ ದೃಢೀಕೃತ ನಕಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-1 ರಿಂದ 4 ಎಂದು, ಸರ್ವೆ ನಂ.125 ರ 5 ಪಹಣಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-5 ರಿಂದ 9 ಎಂದು, ಸರ್ವೆ ನಂ.106 ರ 3 ಪಹಣಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-10 ರಿಂದ 12 ಎಂದು, ಗ್ರಾಮ ಪಂಚಾಯ್ತಿ ಮಾಲವಿ ಇವರು ನೀಡಿರುವಂತಹ ದೃಢೀಕರಣ ಪತ್ರ ಹಾಜರುಪಡಿಸಿದ್ದು ಅದನ್ನು ನಿಪಿ-13 ಎಂದು, 2 ತೆರಿಗೆ ಪಾವತಿ ರಶೀದಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-14 ಮತ್ತು 15 ಎಂದು, ವಂಶವೃಕ್ಷ ದೃಢೀಕರಣ ಪತ್ರ ಹಾಜರುಪಡಿಸಿದ್ದು ಅದನ್ನು ನಿಪಿ-16 ಎಂದು, ನನ್ನ ತಂದೆ, ನನ್ನ ತಾಯಿ, ನನ್ನ ಅಕ್ಕ, ನನ್ನ ಅಣ್ಣ ಇವರ ಮರಣ ಪ್ರಮಾಣಪತ್ರಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-17 ರಿಂದ 20 ಎಂದು, ಸನ್ 1995 ನೇ ಸಾಲಿನ ಮತದಾರರ ಪಟ್ಟಿಯ ನಕಲು ಪ್ರತಿ ಹಾಜರುಪಡಿಸಿದ್ದು ಅದನ್ನು ನಿಪಿ-21 ಎಂದು, ಸದರಿ ದಾಖಲೆಯಲ್ಲಿ ನಮ್ಮ ಕುಟುಂಬದ ಸದಸ್ಯರ ಹೆಸರು ಕ್ರಮ ನಂ.515 ರಿಂದ 518 ರಲ್ಲಿ ನಮೂದು ಇದೆ. ದಿಃ 01-07-2023 ರ ದಾನಪತ್ರದ ದೃಢೀಕೃತ ನಕಲು ಹಾಜರುಪಡಿಸಿದ್ದು ಅದನ್ನು ನಿಪಿ-22 ಎಂದು, ಎಂ ಆರ್ ನಂ. ಹೆಚ್-4 ರ ದೃಢೀಕೃತ ನಕಲು ಹಾಜರುಪಡಿಸಿದ್ದು ಅದನ್ನು ನಿಪಿ-23 ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ವಾದಿ ಪರ ವಕೀಲರು ಮುಂದುವರೆದ ಮುಖ್ಯವಿಚಾರಣೆಗೆ ಸಮಯಾವಕಾಶ ಕೋರಿದ್ದು ನೀಡಲಾಯಿತು.)

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕೀಕೃತ ಮಾಡಲಾಯಿತು.)

ಓ. ಹೇ. ಕೇ. ಸರಿ ಇದೆ,

ಸಿವಿಲ್ ಜಡ್ಜ ಮತ್ತು ಜೆ ಎಂ ಎಫ್ ಸಿ.,
ಹಗರಿಬೊಮ್ಮನಹಳ್ಳಿ